ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY, RESEARCH AND REFERENCE BRANCH**

**ಪತ್ರಿಕಾ ತುಣುಕುಗಳು**
**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಮಳೆ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡಪ್ರಭ    ದಿನಾಂಕ : DATE: 23/10/20

# ಹನ್ನೊಂದು ಜಿಲ್ಲೆಗಳಲ್ಲಿ ಮುಂದುವರಿದ ಮಳೆ,

## ಹಾವೇರಿ, ಹಾಸನ ಜಿಲ್ಲೆಯ ಕೆಲವೆಡೆ ಭರ್ಜರಿ ಮಳೆ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ಬೆಂಗಳೂರು, ಹಾಸನ, ಹಾವೇರಿ ಸೇರಿ ರಾಜ್ಯದ ಹನ್ನೊಂದು ಜಿಲ್ಲೆಗಳಲ್ಲಿ ಬುಧವಾರ ರಾತ್ರಿಯಿಂದೀಚೆಗೆ ಸುಮಾರು ಎರಡ್ಮೂರು ಗಂಟೆಗಳ ಕಾಲ ಭರ್ಜರಿ ಮಳೆಯಾಗಿದ್ದು, ಕೆಲವೆಡೆ ತಗ್ಗುಪ್ರದೇಶಗಳಲ್ಲಿ ನೀರು ನುಗ್ಗಿ ಜನಜೀವನಅಸ್ತವ್ಯಸ್ತಗೊಂಡಿತು. ಏತನ್ಮಧ್ಯೆ, ಭೀಮಾ ಮತ್ತು ಡೋಣಿ ನದಿ ನೀರಿನಮಟ್ಟ ಬಹುತೇಕ ಇಳಿಮುಖವಾಗಿದ್ದು ಕಲಬುರಗಿ, ಯಾದಗಿರಿ, ವಿಜಯಪುರ ಜಿಲ್ಲೆಗಳಲ್ಲಿ ಆವರಿಸಿದ್ದ ಪ್ರವಾಹದಾತಂಕ ನಿವಾರಣೆಯಾಗಿದೆ.

ಉಡುಪಿ ಮತ್ತು ದಕ್ಷಿಣ ಕನ್ನಡದಲ್ಲಿ ಬಿಟ್ಟು ಬಿಟ್ಟು ತುಂತುರು ಮಳೆಯಾಗಿದೆ. ಆದರೆ, ಬೆಂಗಳೂರು, ಹಾವೇರಿ, ಗದಗ, ಶಿವಮೊಗ್ಗ, ಹಾಸನ, ಚಿತ್ರದುರ್ಗ, ದಾವಣಗೆರೆ ಜಿಲ್ಲೆಗಳಲ್ಲಿ ಉತ್ತಮ ಮಳೆ ಸುರಿದಿದೆ. ಮಲೆನಾಡು ವ್ಯಾಪ್ತಿಯಲ್ಲಿರುವ ಕೊಡಗು, ಚಿಕ್ಕಮಗಳೂರು, ಶಿವಮೊಗ್ಗದಲ್ಲಿ ಸಾಧಾರಣ ಮಳೆ ಬಿದ್ದಿದೆ.

## ಹಿಂಗಾರು ಇನ್ನೂ 1 ವಾರ ವಿಳಂಬ

**ಬೆಂಗಳೂರು:** ದಕ್ಷಿಣ ಕರ್ನಾಟಕ, ಮಲೆನಾಡು ಹಾಗೂ ಕರಾವಳಿ ಜಿಲ್ಲೆಗಳಲ್ಲಿ ಇನ್ನೂ 2-3 ದಿನಗಳ ಕಾಲ ಗುಡುಗು ಸಹಿತ ಮಳೆ ಸುರಿಯಲಿದೆ ಎಂದು ಹವಾ ಮಾನ ಇಲಾಖೆ ಮುನ್ಸೂಚನೆ ನೀಡಿದೆ. ಪ್ರಸಕ್ತ ವರ್ಷ ವಾಡಿಕೆಯಂತೆ ಜೂ. 1ಕ್ಕೆ ಆರಂಭವಾದ ಮುಂಗಾರು ಅ.15ರ ವೇಳೆ ಕೊನೆಗೊಂಡು ಹಿಂಗಾರು ಆರಂಭ ಗೊಳ್ಳಬೇಕಾಗಿತ್ತು. ಆದರೆ, ವಾಯುಭಾರ ಕುಸಿತ ಸೇರಿದಂತೆ ಇನ್ನಿತರ ಹವಾಮಾನ ಬದಲಾವಣೆಯಿಂದ ಇನ್ನೂ ಒಂದು ವಾರ ಮುಂಗಾರು ಮುಂದುವರೆಯಲಿದೆ. ಅ.27ರ ವೇಳೆಗೆ ಹಿಂಗಾರು ಆರಂಭಗೊಳ್ಳುವ ಸಾಧ್ಯತೆ ಇದೆ.